# । ನಿಧನ ।

## ಡಾ| ಪಿ. ಸುಧಾಕರ ಶೆಟ್ಟಿ



ಕಟಪಾಡಿ, ಸೆ. 12: ಸುರತ್ಕಲ್ ಎನ್‌ಐಟಿಕೆ(ಕೆಆರ್ ಇಸಿ)ಯ ಮಾಜಿ ಪ್ರಾಂಶುಪಾಲ ಡಾ| ಪಿ. ಸುಧಾಕರ ಶೆಟ್ಟಿ (86) ಅವರು ಮಣಿಪಾಲದ ಆಸ್ಪತ್ರೆಯಲ್ಲಿ ಸೆ. 12ರಂದು ನಿಧನ ಹೊಂದಿದರು.

ಮೃತರು ಪತ್ನಿ, ಪುತ್ರಿ ಮಣಿಪಾಲ ಕೆ.ಎಂ.ಸಿ.ಯ ಗೈನಕಾಲಜಿ ವಿಭಾಗದ ಪ್ರೊಫೆಸರ್ ಹಾಗೂ ಯೂನಿಟ್ ಹೆಡ್ ಆಗಿರುವ ಡಾ| ಜ್ಯೋತಿ ಶೆಟ್ಟಿ, ಪುತ್ರ ಬಂಟ್ವಾಳ ನರಿಕೊಂಬು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ| ಜೀವನ್ ಶೆಟ್ಟಿ ಅವರನ್ನು ಅಗಲಿದ್ದಾರೆ. ಅವರು ಮೂಲತಃ ಪಡುಬಿದ್ರಿ ಕೆರಮ ಮೂಡುಮನೆಯವರಾಗಿದ್ದು ಪ್ರಸ್ತುತ ಸುರತ್ಕಲ್‌ನ ಕೇಶವ ಚೌಟ ಕಾಂಪೌಂಡ್ ನಿವಾಸಿಯಾಗಿದ್ದರು.

ಹಿಂದಿನ ಕೆ.ಆರ್.ಇ.ಸಿ.ಯಲ್ಲಿ ಎಲೆಕ್ಟ್ರಿಕಲ್ ಡಿಪಾರ್ಟ್‌ಮೆಂಟ್‌ನಲ್ಲಿ ಪ್ರೊಫೆಸರ್ ಆಗಿ, ಅನಂತರ ಹೆಡ್ ಆಫ್ ದ ಡಿಪಾರ್ಟ್‌ಮೆಂಟ್ ಆಗಿ ಸೇವೆ ಸಲ್ಲಿಸಿ ಪ್ರಾಂಶುಪಾಲರಾಗಿ ನಿವೃತ್ತರಾಗಿದ್ದರು. ನಿವೃತ್ತಿಯ ಬಳಿಕ ಶಿವಮೊಗ್ಗ ಜವಾಹರಲಾಲ್ ನೆಹರೂ ನ್ಯಾಷನಲ್ ಕಾಲೇಜು ಆಫ್ ಎಂಜಿನಿಯರಿಂಗ್‌ನ ಪ್ರಾಂಶುಪಾಲರಾಗಿ ಹಾಗೂ ವಾಮಂಜೂರು ಸಂತ ಜೋಸೆಫ್ ಎಂಜಿನಿಯರಿಂಗ್ ಕಾಲೇಜು ಇದರ ಪ್ರಥಮ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದರು.

ತಾಂತ್ರಿಕ ಕ್ಷೇತ್ರದಲ್ಲಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಅನೇಕ ಪ್ರಬಂಧ ಮಂಡಿಸಿ ಜನಾನುರಾಗಿಯಾಗಿದ್ದರು. ಅಮೆರಿಕದಲ್ಲಿ ಪೋಸ್ಟ್ ಡಾಕ್ಟರೇಟ್ ಆಗಿ ಸಂಶೋಧನ ಕ್ಷೇತ್ರದಲ್ಲೂ ಸೇವೆ ಮಾಡಿದ್ದಾರೆ. ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಸರಕಾರದ ಅನೇಕ ಸಮಿತಿಗಳಲ್ಲಿ ಸೇವೆ ಸಲ್ಲಿಸಿದ್ದ ಅವರು ಸರಕಾರಕ್ಕೆ ತಾಂತ್ರಿಕ ಸಲಹೆ ನೀಡುತ್ತಿದ್ದರು. ಮಣಿಪುರ ಕುಂತಳ ನಗರ ಭಾರತಿ ಹಿರಿಯ ಪ್ರಾಥಮಿಕ ಶಾಲೆಯ ಕರೆಸ್ಪಾಂಡೆಂಟ್ ಆಗಿಯೂ ಸೇವೆ ಸಲ್ಲಿಸಿದ್ದಾರೆ.

**ಗಣ್ಯರ ಸಂತಾಪ**

ಶಾಸಕರಾದ ಡಾ| ಭರತ್ ಶೆಟ್ಟಿ, ಗುರ್ಮೆ ಸುರೇಶ್ ಶೆಟ್ಟಿ, ಯಶಪಾಲ್ ಎ. ಸುವರ್ಣ, ಎಂಎಲ್‌ಸಿ ಮಂಜುನಾಥ ಭಂಡಾರಿ, ಮಾಜಿ ಸಂಸದ ನಳಿನ್ ಕುಮಾರ್ ಕಟೀಲು, ಮಾಜಿ ಸಚಿವರಾದ ಪ್ರಮೋದ್ ಮಧ್ವರಾಜ್, ಬಿ. ರಮಾನಾಥ ರೈ, ವಿನಯ ಕುಮಾರ್ ಸೊರಕೆ, ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ನಿಕಟಪೂರ್ವ ಅಧ್ಯಕ್ಷ ಮಟ್ಟಾರು ರತ್ನಾಕರ್ ಹೆಗ್ಡೆ, ಮೂರು ಜಿಲ್ಲೆಗಳ ಬಿಜೆಪಿ ಪ್ರಭಾರಿ ಉದಯ ಕುಮಾರ್ ಶೆಟ್ಟಿ ಕಿದಿಯೂರು ಸಂತಾಪ ವ್ಯಕ್ತಪಡಿಸಿದ್ದಾರೆ.

Udayavani, Date:13/09/24, p,no - 04